## ಮೌಖಿಕ ಪರೀಕ್ಷೆ:

ಎ) ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನುಸಾರ ಹಾಗೂ ಅವರು ತೋರಿದ ಅರ್ಹತೆಗನುಗುಣವಾಗಿ 10 (ಹತ್ತು) ಅಂಕಗಳುಳ್ಳ ಮೌಖಿಕ ಪರೀಕ್ಷೆ / ವ್ಯಕ್ತಿತ್ವ ಪರೀಕ್ಷೆಗೆ ಪ್ರತಿ ಗುಂಪು/ಜಾತಿ/ಪಂಗಡಗಳ ಅರ್ಹತೆ ಆಧಾರದ ಮೇಲೆ 1:2 ರ ಪ್ರಮಾಣದಲ್ಲಿ ಬೆಂಗಳೂರಿನಲ್ಲಿ ನೇಮಕಾತಿ ಸಮಿತಿಯ ಮುಂದೆ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕಾಗುತ್ತದೆ ಮತ್ತು ದಾಖಲಾತಿಗಳ ಎರಡು ಸೆಟ್‌ನ್ನು ಪತ್ರಾಂಕಿತ ಅಧಿಕಾರಿಯಿಂದ ದೃಢೀಕರಿಸಿಕೊಂಡು ತರುವುದು. ಈ ಮೌಖಿಕ ಪರೀಕ್ಷೆಗೆ ಕನಿಷ್ಟ ಅಂಕಗಳು ಇರುವುದಿಲ್ಲ. ಅಭ್ಯರ್ಥಿಗಳು ಮೂಲ ದಾಖಲಾತಿಗಳನ್ನು ಮೌಖಿಕ ಪರೀಕ್ಷೆ ಪ್ರಾರಂಭವಾಗುವ ಮುನ್ನ ಹಾಜರುಪಡಿಸಬೇಕು. **ಅಭ್ಯರ್ಥಿಗಳಿಗೆ ಮೌಖಿಕ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.** ಮೌಖಿಕ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನಿಂದ ಮಾತ್ರ ಪಡೆದುಕೊಳ್ಳಬಹುದು (Download). ಅಭ್ಯರ್ಥಿಗಳು ಮೌಖಿಕ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ಈ ಪರೀಕ್ಷೆಗೆ ಗೈರು ಹಾಜರಾಗುವ ಅಭ್ಯರ್ಥಿಯನ್ನು ಅನರ್ಹಗೊಳಿಸಲಾಗುವುದು.

- i) ಪಾಸ್‌ಪೋರ್ಟ್ (Passport)
- ii) ಚಾಲನಾ ಪರವಾನಗಿ ಪತ್ರ (Driving License)
- iii) ಪಾನ್ ಕಾರ್ಡ್ (PAN Card)
- iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
- v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
- vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
- vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)
- viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)
- ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
- x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).
- xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

ಬಿ) **ಮೌಖಿಕ ಪರೀಕ್ಷೆಗೆ ತರಬೇಕಾದ ದಾಖಲಾತಿಗಳು**: i) ಮೌಖಿಕ ಪರೀಕ್ಷೆಯ ಕರೆಪತ್ರ, ii) ದೈಹಿಕ ಪರೀಕ್ಷೆಯ ಫಲಿತಾಂಶ ಹಾಳೆ, iii) ಗುರುತಿನ ಚೀಟಿ, iv) ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ, v) ಪದವಿ ಪ್ರಮಾಣ ಪತ್ರ vi) ಜನ್ಮ ದಿನಾಂಕವನ್ನು ದೃಢೀಕರಿಸುವ ಪ್ರಮಾಣ ಪತ್ರ ಹಾಗೂ ಕೋರಿರುವ ಮೀಸಲಾತಿಯ ಪ್ರಮಾಣ ಪತ್ರಗಳನ್ನು ತರತಕ್ಕದ್ದು. ತಪ್ಪಿದ್ದಲ್ಲಿ ಮೌಖಿಕ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

ಸಿ) ಅಭ್ಯರ್ಥಿಗಳು ಲಿಖಿತ ಮತ್ತು ಮೌಖಿಕ ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ಅಭ್ಯರ್ಥಿಗಳು ಅರ್ಹತೆ ಹೊಂದುವ ಮೀಸಲಾತಿಗಳಾನುಸಾರ ಲಭ್ಯವಿರುವ ಖಾಲಿ ಹುದ್ದೆಗಳಿಗೆ ಚಾಲ್ತಿಯಲ್ಲಿರುವ ನಿಯಮದಂತೆ 1:1 ತಾತ್ಕಾಲಿಕ ಆಯ್ಕೆಪಟ್ಟಿಯನ್ನು ತಯಾರಿಸಲಾಗುವುದು.